ಯಶಸ್ವಿಯಾದ ಮಾತಾಡ್ ಮಾತಾಡ್ ಕನ್ನಡ ಅಭಿಯಾನ | ಧಾರವಾಡದಲ್ಲಿ ಅನುರಣಿಸಿದ ಕನ್ನಡದ ಗೀತೆಗಳು | ವಿಧಾನಪರಿಷತ್ತಿನ ಸಭಾಪತಿ ಹೊರಟ್ಟಿ ಅವರಿಂದ ಸಂಕಲ್ಪ ಬೋಧನೆ

# ಎಲ್ಲೆಡೆ ಮೊಳಗಿದ ಕನ್ನಡ ಡಿಂಡಿಮ



ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಜಿಲ್ಲಾಡಳಿತದ ಸಹಯೋಗದಲ್ಲಿ ಗುರುವಾರ ಇಲ್ಲಿಯ ಪ್ರತಿಷ್ಠಿತ ಕರ್ನಾಟಕ ಕಾಲೇಜಿನ ಆವರಣದಲ್ಲಿ ಹಮ್ಮಿಕೊಂಡಿದ್ದ ಮಾತಾಡ್ ಮಾತಾಡ್ ಕನ್ನಡ, ಕನ್ನಡಕ್ಕಾಗಿ ನಾವು ಕರ್ನಾಟಕ ರಾಜ್ಯೋತ್ಸವ ಅಭಿಯಾನದಲ್ಲಿ ಭಾಗವಹಿಸಿದ ಜನಸ್ತೋಮ.

• **ಕನ್ನಡಪ್ರಭ ವಾರ್ತೆ** ಧಾರವಾಡ

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಜಿಲ್ಲಾಡಳಿತದ ಸಹಯೋಗದಲ್ಲಿ ಗುರುವಾರ ಇಲ್ಲಿಯ ಪ್ರತಿಷ್ಠಿತ ಕರ್ನಾಟಕ ಕಾಲೇಜಿನ ಆವರಣದಲ್ಲಿ ಹಮ್ಮಿಕೊಂಡಿದ್ದ ಮಾತಾಡ್ ಮಾತಾಡ್ ಕನ್ನಡ, ಕನ್ನಡಕ್ಕಾಗಿ ನಾವು ಕರ್ನಾಟಕ ರಾಜ್ಯೋತ್ಸವ ಅಭಿಯಾನದಲ್ಲಿ ಏಕಕಾಲದಲ್ಲಿ ಕನ್ನಡದ ಶ್ರೇಷ್ಠತೆ ಸಾರುವ ಗೀತೆಗಳನ್ನು ಮನೋಹರವಾಗಿ ಪ್ರಸ್ತುತಪಡಿಸಲಾಯಿತು.

ನಾಡು-ನುಡಿಯ ಅಭಿಮಾನವನ್ನು ಬಡಿದೆಬ್ಬಿಸಿದ ಗೀತೆಗಳಿಗೆ ವಿದ್ಯಾರ್ಥಿ ಸಮೂಹ ಹಾಡಿನೊಂದಿಗೆ ಹೆಜ್ಜೆ ಸಹ ಹಾಕಿದರು. ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಭಾಗವಹಿಸಿ ಕನ್ನಡದ ಸಂಕಲ್ಪ ಬೋಧನೆ ಮಾಡಿದರು.

ಐತಿಹಾಸಿಕ ಕರ್ನಾಟಕ ಕಲಾ ಕಾಲೇಜಿನ ಮುಂಭಾಗದ ಆವರಣದಲ್ಲಿ ನೆರೆದಿದ್ದ ಸಾವಿರಾರು ವಿದ್ಯಾರ್ಥಿಗಳು ಕನ್ನಡದ ಹಾಡಿನ ಹಬ್ಬದಲ್ಲಿ ಉತ್ಸಾಹದಿಂದ ಭಾಗವಹಿಸಿದರು. ರಾಷ್ಟ್ರಕವಿ ಕುವೆಂಪು ರಚಿತ ಜಯಭಾರತ ಜನನಿಯ ತನುಜಾತೆ, ಬಾರಿಸು ಕನ್ನಡ ಡಿಂಡಿಮವ, ಡಾ. ಕೆ.ಎಸ್. ನಿಸಾರ್ ಅಹ್ಮದ್ ಅವರ ಜೋಗದ ಸಿರಿ ಬೆಳಕಿನಲ್ಲಿ, ಹಂಸಲೇಖ ರಚನೆಯ ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು ಹಾಡುಗಳು ರಾಗಬದ್ಧವಾಗಿ ಸುಶ್ರಾವ್ಯವಾಗಿ ಅನುರಣಿಸಿದವು. ಕರ್ನಾಟಕ ಕಾಲೇಜಿನ ಸಂಗೀತ ವಿಭಾಗದ ವಿದ್ಯಾರ್ಥಿಗಳು ಈ ನಾಡಗೀತೆಗಳನ್ನು ಪ್ರಸ್ತುತಪಡಿಸಿದರು. ಕಾರ್ಯಕ್ರಮ ಸಂಯೋಜಿಸಿದ ಪ್ರಕಾಶ ಮಲ್ಲಿಗವಾಡ, ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು ಹಾಡಿಗೆ ಹೆಜ್ಜೆ ಹಾಕಿದಾಗ ನೆರೆದ ವಿದ್ಯಾರ್ಥಿ ಸಮೂಹ ಅವರಿಗೆ ಸಾಥ್ ನೀಡಿತು.

ಕನ್ನಡ ನಾಡಿನ ಜವಾಬ್ದಾರಿಯುತ ಪ್ರಜೆಯಾಗಿ ನಾಡು, ನುಡಿ, ಸಂಸ್ಕೃತಿಯ ಉಳಿವು ಬೆಳವಣಿಗೆಗಾಗಿ ನಾವು ನಿರ್ವಹಿಸಬೇಕಾದ ಪಾತ್ರದ ಕುರಿತು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸಂಕಲ್ಪ ಬೋಧಿಸಿದರು. ನಂತರ ಮಾತನಾಡಿದ ಅವರು, ದೇಶದ ಎಲ್ಲ ರಾಜ್ಯಗಳಲ್ಲಿ ಅಲ್ಲಿನ ಸ್ಥಳೀಯ ಭಾಷೆಗಳಿಗೆ ಪ್ರಥಮ ಆದ್ಯತೆ ದೊರೆಯುತ್ತಿದೆ. ವಿಶಾಲ ಹೃದಯಿಗಳಾದ ನಾವು ಕನ್ನಡಿಗರು ನೆರೆಯ ತಮಿಳು, ತೆಲುಗು, ಮಲೆಯಾಳಿ, ಮರಾಠಿ ಮತ್ತಿತರ ಭಾಷಿಕರೊಂದಿಗೆ ಸಹಬಾಳ್ವೆ ನಡೆಸುತ್ತಿದ್ದೇವೆ. ಅವರಿಗೆ ಪ್ರೀತಿಯಿಂದ ಕನ್ನಡ ಕಲಿಸಬೇಕು. ವಿದ್ಯಾರ್ಥಿಗಳು ಕೈಗೊಂಡ ಸಂಕಲ್ಪವನ್ನು ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು, ಅದರಂತೆ ನಡೆಯಬೇಕು ಎಂದರು.

ಹಿರಿಯ ಸಾಹಿತಿ ಮಾಲತಿ ಪಟ್ಟಣಶೆಟ್ಟಿ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಉಪವಿಭಾಗಾಧಿಕಾರಿ ಡಾ. ಗೋಪಾಲಕೃಷ್ಣ ಬಿ, ಜಿಪಂ ಉಪಕಾರ್ಯದರ್ಶಿ ರೇಖಾ ಡೊಳ್ಳಿನವರ, ಕರ್ನಾಟಕ ಕಲಾ ಕಾಲೇಜಿನ ಪ್ರಾಚಾರ್ಯ ಡಾ. ಡಿ.ಬಿ. ಕರಡೋಣಿ, ವಿಜ್ಞಾನ ಕಾಲೇಜಿನ ಪ್ರಾಚಾರ್ಯ ಡಾ. ಎ.ಎಸ್. ಬೆಲ್ಲದ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಮಂಜುಳಾ ಯಲಿಗಾರ, ವಾರ್ತಾಧಿಕಾರಿ ಮಂಜುನಾಥ ಡೊಳ್ಳಿನ, ಜಿಲ್ಲಾ ಕನ್ನಡ ಜಾಗೃತಿ ಸಮಿತಿ ಸದಸ್ಯ ಕೆ.ಎಚ್. ನಾಯಕ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಸ್.ಎಫ್. ಸಿದ್ದನಗೌಡರ, ಕಲಾವಿದರಾದ ಯಕ್ಕೇರಪ್ಪ ನಡುವಿನಮನಿ, ಮಲ್ಲಪ್ಪ ಹೊಂಗಲ್ ಹಾಗೂ ಇತರೆ ಸಂಘ-ಸಂಸ್ಥೆಗಳ ಮುಖಂಡರಿದ್ದರು.

## ಕನ್ನಡ ಗೀತಗಾಯನ ಕಾರ್ಯಕ್ರಮಕ್ಕೆ ಚಾಲನೆ



ಕನ್ನಡ ಗೀತ ಗಾಯನ ಕಾರ್ಯಕ್ರಮಕ್ಕೆ ತಹಸೀಲ್ದಾರ್ ಚಾಲನೆ ನೀಡಿದರು.

**ನವಲಗುಂದ:** ಮಾತಾಡ್ ಮಾತಾಡ್ ಕನ್ನಡ.. ಕನ್ನಡಕ್ಕಾಗಿ ನಾವು, ಕರ್ನಾಟಕ ರಾಜ್ಯೋತ್ಸವ ಅಭಿಯಾನನ್ನು ವಿಶ್ವಾದ್ಯಂತ ಏಕಕಾಲದಲ್ಲಿ ಲಕ್ಷ-ಲಕ್ಷ ಕಂಠಗಳಲ್ಲಿ ಸಾಮೂಹಿಕ ಕನ್ನಡ ಗೀತಗಾಯನ ಹಾಡುವ ಮುಖಾಂತರ ಆಚರಿಸುತ್ತಿದ್ದಾರೆ. ಅದೇ ರೀತಿಯಾಗಿ ನವಲಗುಂದದಲ್ಲಿ ಈ ಕಾರ್ಯಕ್ರಮವನ್ನು ಸಂಭ್ರಮದಿಂದ ಆಚರಿಸಲಾಯಿತು.

ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ. 3 ರ ಆವರಣದಲ್ಲಿ ತಾಲೂಕು ಆಡಳಿತದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದ್ದ, ಸಾಮೂಹಿಕ ಕನ್ನಡ ಗೀತಗಾಯನ ಕಾರ್ಯಕ್ರಮವನ್ನು ಡೊಳ್ಳು ಬಾರಿಸುವ ಮೂಲಕ ತಹಸೀಲ್ದಾರ್ ನವೀನಹುಲ್ಲೂರ ಕಾರ್ಯಕ್ರಮಕ್ಕೆ ಚಾಲನೆಯನ್ನು ನೀಡಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜ ಮಾಯಾಚಾರಿ, ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಲ್ಲಿಕಾರ್ಜುನ ಪವಾಡಶೆಟ್ಟರ, ತಾಪಂ ಇಒ ಎಸ್.ಎಂ.ಕಾಂಬಳೆ, ಸುನಿತಾ ಪಾಟೀಲ್, ವೀರಪ್ಪ ಶಿಶ್ವಿನಹಳ್ಳಿ, ರಾಮು ಚವ್ಹಾಣ್, ಬಿ.ಬಿ.ಹೊನ್ನಕುದರಿ, ಎನ್.ಎನ್.ಹಾಲಿಗೇರಿ, ಎಸ್.ಎಂ.ಬೆಂಚಿಕೇರಿ, ಎನ್.ವಾಯ್. ಕಳಸಾಪೂರ, ಅಡಿವೆಪ್ಪ ಸಿರಸಂಗಿ, ಬಸಣ್ಣ ಹಳ್ಳದ, ಎಂ.ಎಚ್.ಚಿಕನಾಳ, ಶಿವಯೋಗಿ ಜಂಗಣ್ಣವರ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಶಾಲೆಗಳ ಶಿಕ್ಷಕ-ಶಿಕ್ಷಕಿಯರು, ಶಾಲಾ ಮಕ್ಕಳು ಉಪಸ್ಥಿತರಿದ್ದರು.

## ಧಾರವಾಡ: ವಿದ್ಯಾವರ್ಧಕ ಸಂಘದ ಆವರಣದಲ್ಲಿ ಕನ್ನಡದ ಝೇಂಕಾರ

**ಧಾರವಾಡ:** ಮಾತಾಡ್ ಮಾತಾಡ್ ಕನ್ನಡ; ಕನ್ನಡಕ್ಕಾಗಿ ನಾವು ಘೋಷಣೆಯಡಿ ಏಕಕಾಲಕ್ಕೆ ಆಯೋಜಿಸಿದ್ದ ಕರ್ನಾಟಕ ರಾಜ್ಯೋತ್ಸವ ಅಭಿಯಾನದ ಅಂಗವಾಗಿ ಸಾಮೂಹಿಕ ಕನ್ನಡ ಗೀತ ಗಾಯನ ಕಾರ್ಯಕ್ರಮವು ಗುರುವಾರ ಬೆಳಗ್ಗೆ 11ಕ್ಕೆ ಕರ್ನಾಟಕ ವಿದ್ಯಾವರ್ಧಕ ಸಂಘದ ಆವರಣದಲ್ಲಿ ಉತ್ಸಾಹದಿಂದ ಜರುಗಿ ಕನ್ನಡದ ಝೇಂಕಾರವನ್ನು ಮೊಳಗಿಸಿತು.

ನಾಡಗೀತೆಯೊಂದಿಗೆ ಆರಂಭವಾದ ಕಾರ್ಯಕ್ರಮದಲ್ಲಿ ಮೊದಲ ಗೀತೆಯಾಗಿ ಬಾರಿಸು ಕನ್ನಡ ಡಿಂಡಿಮವ, ಎರಡನೇ ಗೀತೆಯಾಗಿ ಜೋಗದ ಸಿರಿ ಬೆಳಕಿನಲ್ಲಿ ತುಂಗೆಯ ತೆನೆ ಬಳುಕಿನಲ್ಲಿ ಹಾಗೂ ಮೂರನೇ ಗೀತೆಯಾಗಿ ಹುಟ್ಟಿದರೆ ಕನ್ನಡ ನಾಡಲ್ ಹುಟ್ಟಬೇಕು ಗೀತೆಗಳನ್ನು ಪ್ರಸ್ತುತ ಪಡಿಸಲಾಯಿತು. ತಹಸೀಲ್ದಾರ್ ಡಾ. ಸಂತೋಷ ಬಿರಾದಾರ ಕಾರ್ಯಕ್ರಮದಲ್ಲಿ ನೆರೆದ ಸಾರ್ವಜನಿಕರಿಗೆ ಕನ್ನಡ ಸಂಕಲ್ಪದ ಪ್ರತಿಜ್ಞೆ ಬೋಧಿಸಿದರು. ಸತೀಶ್ ತುರಮುರಿ ಸ್ವಾಗತಿಸಿದರು. ಪ್ರಕಾಶ ಉಡಕೇರಿ ವಂದಿಸಿದರು. ಸಂಯೋಜಕಿ ವಿಶ್ವೇಶ್ವರಿ ಹಿರೇಮಠ ನಿರೂಪಿಸಿದರು. ಗೀತಗಾಯನ ಕಾರ್ಯಕ್ರಮದ ಹಿನ್ನೆಲೆಯಾಗಿ ತಬಲಾ ವಾದಕ ಅನಿಲ್ ಮೇತ್ರಿ ನೇತೃತ್ವದ ತಂಡವು ಸಂಗೀತ ಸಂಯೋಜನೆ ನೀಡಿತು.

ಮಾಜಿ ಶಾಸಕ ಹಾಗೂ ಕರ್ನಾಟಕ ಗಡಿಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಚಂದ್ರಕಾಂತ ಬೆಲ್ಲದ, ಕನ್ನಡ ಹೋರಾಟಗಾರರಾದ ಬಿ.ಕೆ. ಹೊಂಗಲ್, ನಿಂಗಣ್ಣ ಕುಂಟಿ, ಶಿವಣ್ಣ ಬೆಲ್ಲದ, ಸದಾನಂದ ಶಿವಳ್ಳಿ, ಡಾ. ಧನವಂತ ಹಾಜವಗೋಳ, ಲಕ್ಷ್ಮಣ ಬಕ್ಕಾಯಿ, ಹೇಮಾ ಪಟ್ಟಣಶೆಟ್ಟಿ, ಬಸಲಿಂಗಯ್ಯ ಹಿರೇಮಠ, ಪಶುವೈದ್ಯಕೀಯ ಇಲಾಖೆಯ ಉಪನಿರ್ದೇಶಕ ಉಮೇಶ ಕೊಂಡಿ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಕಾಶಿನಾಥ ಭದ್ರಣ್ಣವರ, ಧಾರವಾಡ ಎಪಿಎಂಸಿ ಉಪನಿರ್ದೇಶಕ ಪ್ರಭಾಕರ ಅಂಗಡಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಕನ್ನಡದ ಮನಸ್ಸುಗಳು ಇದ್ದವು. ಇದಲ್ಲದೇ ಗುರುವಾರ ಬೆಳಗ್ಗೆ 11ಕ್ಕೆ ಧಾರವಾಡದ ಹಲವು ಶಾಲಾ-ಕಾಲೇಜುಗಳಲ್ಲೂ ಕನ್ನಡದ ಗೀತಗಾಯನ ಯಶಸ್ವಿಯಾಗಿ ನಡೆಯಿತು.



ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ ಗುರವಾರ ನಡೆದ ಕನ್ನಡದ ಗೀತ ಗಾಯನಕ್ಕೆ ಸಾಕ್ಷಿಯಾದವರು.

## ಗೀತಗಾಯನ ಕಾರ್ಯಕ್ರಮ

**ಕುಂದಗೋಳ:** ಕನ್ನಡ ರಾಜ್ಯೋತ್ಸವ ಅಂಗವಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದಿಂದ ಮಾತಾಡ್ ಮಾತಾಡ್ ಕನ್ನಡ ಅಭಿಯಾನ ಅಂಗವಾಗಿ ಪಟ್ಟಣದ ಶ್ರೀ ಹರಭಟ್ಟ ಮಹಾವಿದ್ಯಾಲಯದಲ್ಲಿ ಕನ್ನಡ ಗೀತ ಗಾಯನ ನಡೆಯಿತು. ತಾಲೂಕಿನ ಹರಲಾಪೂರ ಸಿ.ವೈ.ಸಿ.ಡಿ ಕಲಾತಂಡದವರು ಮಕ್ಕಳೊಂದಿಗೆ ಗೀತ ಗಾಯನ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ವಿದ್ಯಾರ್ಥಿನಿಯರು ಭುವನೇಶ್ವರಿ ದೇವಿಯ ವಿವಿಧ ಪೋಷಾಕುಗಳೊಂದಿಗೆ ಪಾಲ್ಗೊಂಡಿದ್ದು ವಿಶೇಷವಾಗಿತ್ತು. ಪಪಂ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಶಿಕ್ಷಕರು ಸಿಬ್ಬಂದಿ ಉಪಸ್ಥಿತರಿದ್ದರು.